ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 11–10–2019

# ಪತ್ರಿಕಾ ಆಮಂತ್ರಣ

1. ಶ್ರೀ ಮಹರ್ಷಿ ವಾಲ್ಮೀಕಿ ಪ್ರತಿಮೆಗೆ ಮಾಲಾರ್ಪಣೆ:

ಶ್ರೀ ಬಿ.ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಅಧ್ಯಕ್ಷತೆ:

ಶ್ರೀ ಗೋವಿಂದ ಎಂ. ಕಾರಜೋಳ,
ಉಪ ಮುಖ್ಯಮಂತ್ರಿಗಳು,
ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು
ಕರ್ನಾಟಕ ಸರ್ಕಾರ

ಡಾ. ಸಿ.ಎನ್. ಅಶ್ವಥ್‌ನಾರಾಯಣ,
ಉಪ ಮುಖ್ಯಮಂತ್ರಿಗಳು,
ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು,
ಕರ್ನಾಟಕ ಸರ್ಕಾರ

ಶ್ರೀ ಲಕ್ಷ್ಮಣ ಎಸ್. ಸವದಿ,
ಉಪ ಮುಖ್ಯಮಂತ್ರಿಗಳು,
ಸಾರಿಗೆ ಮತ್ತು ಕೃಷಿ ಸಚಿವರು,
ಕರ್ನಾಟಕ ಸರ್ಕಾರ.

ದಿನಾಂಕ: 13–10–2019 ಭಾನುವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ

ಸ್ಥಳ: "ಶ್ರೀ ಮಹರ್ಷಿ ವಾಲ್ಮೀಕಿ ತಪೋವನ", ಶಾಸಕರ ಭವನ ಮುಂಭಾಗ, ಬೆಂಗಳೂರು.

2. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆವತಿಯಿಂದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಮತ್ತು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನ ಸಮಾರಂಭ:

ಉದ್ಘಾಟನೆ:

ಶ್ರೀ ಬಿ.ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಅಧ್ಯಕ್ಷತೆ:

ಶ್ರೀ ಗೋವಿಂದ ಎಂ. ಕಾರಜೋಳ,
ಉಪ ಮುಖ್ಯಮಂತ್ರಿಗಳು,
ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು

ಘನ ಉಪಸ್ಥಿತರು:

ಶ್ರೀ ಡಿ. ವಿ. ಸದಾನಂದಗೌಡ,
ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು,
ಭಾರತ ಸರ್ಕಾರ.

ಶ್ರೀಮತಿ ನಿರ್ಮಲ ಸೀತಾರಾಮನ್,
ಕೇಂದ್ರ ವಿತ್ತ ಮತ್ತು ಕಾರ್ಪೋರೇಟ್ ವ್ಯವಹಾರಗಳ ಸಚಿವರು
ಭಾರತ ಸರ್ಕಾರ.

ಡಾ. ಸಿ. ಎನ್. ಅಶ್ವಥ್‌ನಾರಾಯಣ,
ಉಪ ಮುಖ್ಯಮಂತ್ರಿಗಳು,
ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು,
ಕರ್ನಾಟಕ ಸರ್ಕಾರ

ಶ್ರೀ ಲಕ್ಷ್ಮಣ ಎಸ್. ಸವದಿ,
ಉಪ ಮುಖ್ಯಮಂತ್ರಿಗಳು,
ಸಾರಿಗೆ ಮತ್ತು ಕೃಷಿ ಸಚಿವರು,
ಕರ್ನಾಟಕ ಸರ್ಕಾರ

ದಿನಾಂಕ: 13-10-2019 ಭಾನುವಾರ, ಸಮಯ: ಬೆಳಿಗ್ಗೆ 11-00 ಗಂಟೆಗೆ

ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು

## ಪತ್ರಿಕಾ ಪ್ರಕಟಣೆ

# ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ ) :

2019-20 ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ರಾಜ್ಯದಾದ್ಯಂತ ಹೊಸದಾಗಿ ವಾಣಿಜ್ಯ (ಬೆರಳಚ್ಚು ಹಾಗೂ ಶೀಘ್ರಲಿಪಿ) ಶಾಲೆಗಳನ್ನು ಹಾಗೂ ಗಣಕಯಂತ್ರ ಶಿಕ್ಷಣ ಶಾಲೆಗಳನ್ನು ಪ್ರಾರಂಭಿಸಲು ಅಕ್ಟೋಬರ್ 31 ರ ವರೆಗೆ ಬೆಂಗಳೂರು ವಿಭಾಗಕ್ಕೆ ಸಂಬಂಧಪಟ್ಟಂತೆ ಸಹ ನಿರ್ದೇಶಕರು-1 ಬೆಂಗಳೂರು ವಿಭಾಗ, ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಕೆ.ಆರ್. ವೃತ್ತ, ಬೆಂಗಳೂರು ಇವರಿಗೆ ಅರ್ಜಿ ಸಲ್ಲಿಸುವುದು. ಕಲಬುರಗಿ ವಿಭಾಗಕ್ಕೆ ಸಂಬಂಧಪಟ್ಟಂತೆ ಸಹ ನಿರ್ದೇಶಕರು, ಅಪರ ಆಯುಕ್ತರ ಕಚೇರಿ, ಕಲಬುರಗಿ, ಇವರಿಗೆ ಬೆಳಗಾವಿ, ಹಾಗೂ ಮೈಸೂರು ವಿಭಾಗಗಳಿಗೆ ಸಂಬಂಧಪಟ್ಟಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯಾ ವಿಭಾಗದ ಸಹ ನಿರ್ದೇಶಕರಿಗೆ ಅರ್ಜಿಯನ್ನು ಸಲ್ಲಿಸುವುದು.

ರಾಜ್ಯದಲ್ಲಿನ ಎಲ್ಲಾ ಅಂಗೀಕೃತ ವಾಣಿಜ್ಯ ಶಾಲೆಗಳಲ್ಲಿ ಪ್ರಸ್ತುತ ನಡೆಸಲಾಗುತ್ತಿರುವ ಬೆರಳಚ್ಚು/ಶೀಘ್ರಲಿಪಿ ಜೊತೆಗೆ ಕಂಪ್ಯೂಟರ್ ಶಿಕ್ಷಣ ಅಳವಡಿಸಿಕೊಳ್ಳಲು ಸರ್ಕಾರ 2006 ರಲ್ಲಿ ಆದೇಶಿಸಿದ್ದು, ಅದರಂತೆ ಅರ್ಜಿ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗೆ **www.schooleducation.kar.nic.in ---secondary education – –commerce education** ದಲ್ಲಿ ಪರಿಶೀಲಿಸುವುದು. ಹಾಗೂ ಹಿರಿಯ ಸಹಾಯಕ ನಿರ್ದೇಶಕರು, (ವಾಣಿಜ್ಯ) ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಮೂವರು ಗಣ್ಯರ ಆಯ್ಕೆ : ಶ್ರೀ ಗೋವಿಂದ ಎಂ ಕಾರಜೋಳ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ ) :

ಪರಿಶಿಷ್ಟ ಜನಾಂಗದ ಶ್ರೇಯೋಭಿವೃದಿಗಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಮೂವರು ಗಣ್ಯರನ್ನು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ ಅವರು ಪ್ರಕಟಿಸಿದರು.

ವಿಧಾನಸೌಧದಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಹಿತ್ಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಡಾ. ಕಮಲಾ ಹಂಪನಾ, ಸಾಮಾಜಿಕ ಕ್ಷೇತ್ರದಲ್ಲಿ ಗುರುತರವಾಗಿ ಸೇವೆಸಲ್ಲಿಸುತ್ತಿರುವ ಶ್ರೀ ಓಬಳಪ್ಪ ಹಾಗು ಶೈಕ್ಷಣಿಕ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಡಾ. ಜಿ. ರಂಗಯ್ಯ ಅವರನ್ನು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ವಿಶ್ರಾಂತ ಕುಲಪತಿಗಳು ಹಾಗು ಮೈಸೂರು ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ನಿರಂಜನ್ ಎಸ್. ಆರ್. ಅವರ ಅಧ್ಯಕ್ಷತೆಯ ಆಯ್ಕೆ ಸಮಿತಿಯು ಈ ಮೂವರು ಗಣ್ಯರನ್ನು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಿ ವರದಿ ನೀಡಿದ್ದು ಸರ್ಕಾರವು ಈ ವರದಿಯನ್ನು ಅಂಗೀಕರಿಸಿದೆ. ರಾಜ್ಯ ಮಟ್ಟದ ಶ್ರೀ ವಾಲ್ಮೀಕಿ ಜಯಂತಿ ಕಾರ್ಯಕ್ರಮವು ಅಕ್ಟೋಬರ್ 13 ರಂದು ಬೆಳಿಗ್ಗೆ 11 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ನಡೆಯಲಿದ್ದು, ಮುಖ್ಯಮಂತ್ರಿ ಶ್ರೀ ಬಿ.ಎಸ್. ಯಡಿಯೂರಪ್ಪ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಈ ಸಮಾರಂಭದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ಪ್ರತಿ ಪ್ರಶಸ್ತಿಯು ತಲಾ 20 ಗ್ರಾಂ ಚಿನ್ನದ ಪದಕ ಹಾಗು 5 ಲಕ್ಷ ರೂ. ನಗದು ಒಳಗೊಂಡಿರುತ್ತದೆ ಎಂದು ಅವರು ಪ್ರಕಟಿಸಿದರು.

ಡಾ. ಕಮಲಾ ಹಂಪನಾ ಅವರು ಕರ್ನಾಟಕದ ಅಗ್ರಗಣ್ಯ ಮಹಿಳಾ ಸಾಹಿತಿಯಾಗಿದ್ದಾರೆ. ನಿರಂತರ ಪರಿಶ್ರಮ, ನಾಡುನುಡಿಯ ಬಗೆಗಿನ ಅನುಪಮ ಪ್ರೀತಿ, ಅವರ ಸಾಹಿತ್ಯಿಕ ಸಾಧನೆಯಿಂದಲೇ ಕನ್ನಡ ಸಾಹಿತ್ಯ ಲೋಕದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯಿಂದ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಯವರೆಗೆ ಹಲವಾರು ಪ್ರಶಸ್ತಿಗಳನ್ನು ಪಡೆದಿದ್ದಾರೆ.

ಶ್ರೀ ಓಬಳಪ್ಪ ಅವರು ನಿವೃತ್ತ ಕೃಷಿ ಅಧಿಕಾರಿಯಾಗಿದ್ದು, ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಆಡಳಿತಾಧಿಕಾರಿಯಾಗಿ ಹಾಗೂ ಹರಿಹರದ ವಾಲ್ಮೀಕಿ ಹಾಸ್ಟಲ್ ಸಮಿತಿಯ ಅಧ್ಯಕ್ಷರಾಗಿ ಸೇವೆಸಲ್ಲಿಸುತ್ತಿದ್ದಾರೆ. ವಾಲ್ಮೀಕಿ ಸಮಾಜದ ಮಕ್ಕಳಿಗೆ ಶಿಕ್ಷಣದ ಮೌಲ್ಯಗಳ ಬಗ್ಗೆ ಅರಿವು ಮೂಡಿಸಿ, ಉಚಿತ ಶಿಕ್ಷಣ ದೊರಕಿಸಿಕೊಡಲು ಅವಿರತವಾಗಿ ಶ್ರಮಿಸುತ್ತಿದ್ದಾರೆ. ಪರಿಶಿಷ್ಟ ವರ್ಗಗಳ ಜನರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಶ್ರಮಿಸುತ್ತಿದ್ದಾರೆ.

ಡಾ. ಜಿ. ರಂಗಯ್ಯ ಅವರು ನರರೋಗ ತಜ್ಞರಾಗಿದ್ದಾರೆ. ಅವರು ವಿದೇಶದಲ್ಲಿ ನ್ಯೂಯಾರ್ಕ್ ಸಿಟಿ ಮೆಡಿಕಲ್ ಸೊಸೈಟಿ ಅಧ್ಯಕ್ಷರಾಗಿ, ಅಮೇರಿಕ ದೇಶದಲ್ಲಿರುವ ಇಂಡಿಯನ್ ನ್ಯೂರಾಲಜಿಸ್ಟ್ ಸಂಸ್ಥೆಯ ಕಾರ್ಯದರ್ಶಿಯಾಗಿ, ಇಂಡಿಯನ್ ನ್ಯೂರಾಲಜಿಸ್ಟ್ ನ್ಯಾಷನಲ್ ಅಸೋಸಿಯೇಷನ್ ಅಧ್ಯಕ್ಷರಾಗಿ, ನ್ಯೂಯಾರ್ಕ್‌ನ ಪ್ರತಿಷ್ಠಿತ ಸ್ಥಳಗಳಲ್ಲಿ ಸ್ಥಾಪಿಸಿರುವ ಮಹಾತ್ಮ ಗಾಂಧಿ ಪ್ರತಿಮೆಯ ಸ್ಥಾಪಕ ಸಮಿತಿ ಸದಸ್ಯರಾಗಿದ್ದಾರೆ. ರಾಷ್ಟದಲ್ಲಿ ಶೈಕ್ಷಣಿಕ ಕ್ಷೇತ್ರಕ್ಕೆ ಅಪಾರವಾಗಿ ಸೇವೆ ಸಲ್ಲಿಸಿದ್ದಾರೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಕುಮಾರ್ ನಾಯಕ್, ಉಪಸ್ಥಿತರಿದ್ದರು.

## ವಿಧಾನ ಪರಿಷತ್ ಕಲಾಪಗಳು

ಭಾರತ ಸಂವಿಧಾನದ 151 (2) ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು 31ನೇ ಮಾರ್ಚ್ 2018 ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ಮೇಲಿನ ವಾರ್ಷಿಕ ತಾಂತ್ರಿಕ ಪರಿಶೀಲನಾ ವರದಿ.

ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ (ಸಂಖ್ಯೆ–2) ವರದಿ ಹಾಗೂ ಸಾಮಾನ್ಯ ಹಾಗೂ  ಸಾಮಾಜಿಕ ವಲಯದ (ಸಂಖ್ಯೆ–4) ವರದಿಯನ್ನು ವಿಧಾನ ಪರಿಷತ್ ಸಭೆಯಲ್ಲಿ ಮಂಡಿಸಲಾಯಿತು.

ಅಲ್ಲದೆ 2019–20 ನೇ ಸಾಲಿನ ಹಣಕಾಸಿನ ಮಧ್ಯ ವಾರ್ಷಿಕ ಪರಿಶೀಲನಾ ವರದಿಯನ್ನು ಸಹ ಒಪ್ಪಿಸಲಾಯಿತು.  ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ವೀಣಾ ಅಚ್ಚಯ್ಯ ಅವರು ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ 2018 – 19ನೇ ಸಾಲಿನ 35 ನೇ ವರದಿಯನ್ನು ಒಪ್ಪಿಸಿದರು.  ಇದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಮಹಿಳೆಯರ ಮತ್ತು ಮಕ್ಕಳು ಹಾಗೂ ವಿಕಲಚೇತನರಿಗಾಗಿ ಹಮ್ಮಿಕೊಂಡಿರುವ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲನೆ ಮತ್ತು ಜೀವನೋಪಾಯ ಹಾಗೂ ಕಾರ್ಮಿಕ ಇಲಾಖೆಯಲ್ಲಿ ಮಹಿಳೆಯರು ಮತ್ತು ಮಕ್ಕಳಿಗಾಗಿ ಹಮ್ಮಿಕೊಂಡಿರುವ ಕಲ್ಯಾಣ ಕಾರ್ಯಕ್ರಮಗಳ ಕುರಿತ ವರದಿ ಇದಾಗಿದೆ.

ವಿಧಾನ ಪರಿಷತ್‌ನಲ್ಲಿ ನಿಯಮ 330 ರ ಮೇರೆಗೆ ವಿಧಾನ ಪರಿಷತ್ ಸದಸ್ಯರಾದ ವಿಜಯ್‌ಸಿಂಗ್, ಶ್ರೀಕಂಠೇಗೌಡ, ರಾಥೋಡ್ ಮುಂತಾದವರು ರಾಜ್ಯದಲ್ಲಿ ಉಂಟಾಗಿರುವ ನೆರೆ ಹಾವಳಿಗೆ ಸರ್ಕಾರ ಸೂಕ್ತ ಪರಿಹಾರವನ್ನು ಶೀಘ್ರಗತಿಯಲ್ಲಿ ನೀಡುವಂತೆ ಒತ್ತಾಯಿಸಿದರು.

ನಂತರ ಉತ್ತರಿಸಿದ ಕಂದಾಯ ಸಚಿವ ಆರ್. ಅಶೋಕ್, ನಿನ್ನೆಯಷ್ಟೇ ಕಳೆದ 2018 ನೇ ಸಾಲಿನ ಬೆಳೆ ಪರಿಹಾರ ಹಣ 129.39 ಕೋಟಿ ರೂ ಬಿಡುಗಡೆಯಾಗಿದ್ದು, ಇದನ್ನು ರೈತರ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್. ಮೂಲಕ ಜಮಾ ಮಾಡಲು ಕ್ರಮ ಕೈಗೊಳ್ಳಲಾಗಿದೆ.  ನೆರೆ ಸಂತ್ರಸ್ಥರಿಗೂ ಸಹ ಇದೇ ಮಾದರಿಯಲ್ಲಿ ಮಧ್ಯವರ್ತಿಗಳ ಹಾವಳಿ ಇಲ್ಲದೆ ಹಣ ಪಾವತಿಸಲಾಗುವುದು ಎಂದು ತಿಳಿಸಿದರು.

## ಸಂತಾಪ ಸಂದೇಶ

ಬೆಂಗಳೂರು, ಅಕ್ಟೋಬರ್ 11, (ಕರ್ನಾಟಕ ವಾರ್ತೆ)

ಕರ್ನಾಟಕ ಸಂಗೀತದಲ್ಲಿ ಸ್ಯಾಕ್ಸೋಫೋನ್ ವಾದ್ಯಕ್ಕೆ ಒಂದು ವಿಶಿಷ್ಟ ಸ್ಥಾನವನ್ನು ಗಳಿಸಿಕೊಟ್ಟ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಜನಮನ್ನಣೆ ಗಳಿಸಿರುವ ಹಾಗೂ ದೇಶ ವಿದೇಶಗಳಲ್ಲಿ ಸ್ಯಾಕ್ಸೋಫೋನ್ ಕಚೇರಿಗಳನ್ನು ಡಾ. ನರಸಿಂಹಲು ವಡವಟ್ಟಿಯವರ ಕ್ಲಾರಿಯೋನೆಟ್‌ನೊಂದಿಗೆ ಜುಗಲ್‌ಬಂದಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿಕೊಟ್ಟ ಸ್ಯಾಕ್ಸೋಫೋನ್ ಮಾಂತ್ರಿಕ ಡಾ ಕದ್ರಿ ಗೋಪಾಲನಾಥ್ ಅವರು ದೈವಾಧೀನರಾಗಿರುವುದು ಅತೀವ ದು:ಖವನ್ನು ತಂದಿದೆ. ಸಂಗೀತ ಪ್ರಪಂಚದಲ್ಲಿ ಇವರ ಹೆಸರು ಚಿರಸ್ಮರಣೀಯ.

ಪದ್ಮಶ್ರೀ, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪುರಸ್ಕೃತರು, ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ ಹಾಗೂ ಪ್ರತಿಷ್ಠಿತ ಸಂಸ್ಥೆಗಳ ಪ್ರಶಸ್ತಿ ಪುರಸ್ಕೃತರಾದ ಇವರ ಆತ್ಮಕ್ಕೆ ಭಗವಂತನು ಚಿರಶಾಂತಿಯನ್ನು ನೀಡಲೆಂದು ಹಾಗೂ ಅವರ ಕುಟುಂಬ ವರ್ಗದವರಿಗೆ, ಶಿಷ್ಯವರ್ಗಕ್ಕೆ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲೆಂದು ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶ್ರೀ ಸಿ.ಟಿ. ರವಿ ಅವರು ತಮ್ಮ ಸಂತಾಪ ಸಂದೇಶದಲ್ಲಿ ತಿಳಿಸಿದ್ದಾರೆ.